## 18. ಜಲಾಶಯಗಳಲ್ಲಿ ಹೆಚ್ಚಿದ ಒಳಹರಿವು

ರಾಜ್ಯದ ಹಲವೆಡೆ ಕಳೆದೊಂದು ವಾರದಿಂದ ಸುರಿಯುತ್ತಿರುವ ಧಾರಾಕಾರ ಮಳೆಯಿಂದಾಗಿ ಹಲವು ಜಲಾಶಯಗಳಲ್ಲಿ ಒಳಹರಿವು ಹೆಚ್ಚಳಗೊಂಡು, ಭಾರೀ ಪ್ರಮಾಣದಲ್ಲಿ ನೀರನ್ನು ಹೊರಕ್ಕೆ ಬಿಡಲಾಗುತ್ತಿದೆ. ಕೊಡಗಿನಲ್ಲಿ ವ್ಯಾಪಕ ಮಳೆಯಿಂದಾಗಿ ಕೃಷ್ಣರಾಜಸಾಗರ ಅಣೆಕಟ್ಟೆ ವಾರದಲ್ಲಿ ಭರ್ತಿಯಾಗುವ ಸಾಧ್ಯತೆ ಇದೆ. ಅಣೆಕಟ್ಟೆಗಳಿಂದ ಹೆಚ್ಚುವರಿ ನೀರು ಹೊರ ಬಿಡುತ್ತಿರುವುದರಿಂದ ತೀರ ಪ್ರದೇಶದ ಜನರಲ್ಲಿ ಆತಂಕ ಮನೆ ಮಾಡಿದೆ.

**ಎಚ್.ಡಿ.ಕೋಟೆ:–** ಕಬಿನಿ ಜಲಾಶಯದಿಂದ 50 ಸಾವಿರ ಕ್ಯೂಸೆಕ್ ನೀರು ಹೊರ ಬಿಟ್ಟಿರುವುದರಿಂದ ತಾಲ್ಲೂಕಿನ ಮಾದಾಪುರ ಕೆ.ಬೆಳತ್ತೂರು ಸಂಪರ್ಕ ಸೇತುವೆ ಜಲಾವೃತ್ತವಾಗುವ ಹಂತ ತಲುಪಿದೆ. ಕೇರಳದಲ್ಲಿ ಮಳೆ ಮುಂದುವರಿದಿರುವುದರಿಂದ ಕಬಿನಿ ಜಲಾಶಯದ ಒಳಹರಿವು ಸಂಜೆಯಿಂದ 50 ಸಾವಿರ ಕ್ಯೂಸೆಕ್‌ಗೆ ಏರಿಕೆಯಾಗಿದ್ದು, ಅಷ್ಟೇ ಪ್ರಮಾಣದ ನೀರನ್ನು ಜಲಾಶಯದ 4 ಕ್ರೆಸ್ಟ್‌ಗೇಟ್‌ಗಳ ಮೂಲಕ ಹೊರ ಬಿಡಲಾಗಿದೆ. ಬಿದರಳ್ಳಿ ಮಾರ್ಗದ ಸೇತುವೆ ಕಳೆದ 4–5 ದಿನಗಳ ಹಿಂದಿನಿಂದ ಜಲಾವೃತ್ತವಾಗಿದ್ದರೆ, ಇನ್ನು ಮಾದಾಪುರ ಮಾರ್ಗವಾಗಿ ಕೆ.ಬೆಳತ್ತೂರು ಮಾರ್ಗಕ್ಕೆ ಸಂಪರ್ಕ ಕಲ್ಪಿಸುತ್ತಿದ್ದ ಸೇತುವೆ ಮೇಲಿಂದ ಸುಮಾರು ಒಂದೆರಡು ಅಡಿಗಳಷ್ಟು ನೀರು ಹರಿಯಲಾರಂಭಿಸಿದ್ದು ಜಲಾಶಯದ ಸಂಪರ್ಕ ಕಡಿತಗೊಳ್ಳುವ ಸಾಧ್ಯತೆ ಇದೆ.

**ಶ್ರೀರಂಗಪಟ್ಟಣ:–** ಕೊಡಗು ಸೇರಿದಂತೆ ಕಾವೇರಿ ನದಿ ಪಾತ್ರದಲ್ಲಿ ವ್ಯಾಪಕ ಮಳೆಯಾಗುತ್ತಿರುವ ಹಿನ್ನೆಲೆಯಲ್ಲಿ ಕೆಆರ್‌ಎಸ್ ಜಲಾಶಯದ ಒಳ ಹರಿವಿನ ಪ್ರಮಾಣ 43 ಸಾವಿರ ಕ್ಯೂಸೆಕ್‌ಗೂ ಹೆಚ್ಚು ನೀರು ಹರಿದು ಬರುತ್ತಿದ್ದು, ಅಣೆಕಟ್ಟೆ ವಾರದಲ್ಲಿ ಭರ್ತಿಯಾಗುವ ಸಾಧ್ಯತೆಯಿದೆ. ಕಳೆದೊಂದು ವಾರದಿಂದ ಕೊಡಗು ಭಾಗದಲ್ಲಿ ಹೆಚ್ಚಿನ ಮಳೆ ಬೀಳುತ್ತಿದ್ದು, ಕಾವೇರಿ ನದಿ ಮೂಲಕ ಜಲಾಶಯಕ್ಕೆ ಹೆಚ್ಚಿನ ಪ್ರಮಾಣದಲ್ಲಿ ನೀರು ಹರಿದು ಬರುತ್ತಿದೆ. 43,600 ಕ್ಯೂಸೆಕ್ ನೀರು ಜಲಾಶಯಕ್ಕೆ ಹರಿದು ಬಂದಿದ್ದರಿಂದ 3 ದಿನಗಳಲ್ಲೇ 105 ಇದ್ದ ನೀರಿನ ಮಟ್ಟ 111 ಅಡಿಗೆ ಏರಿಕೆ ಕಂಡು ಬಂದಿದೆ. ಮುಂಗಾರು ಮಳೆ ಈ ಬಾರಿ ತಡವಾಗಿ ಆಗಮಿಸಿದ್ದು, ಮಳೆ ಮೇಲೆ ನಂಬಿಕೆ ಇಟ್ಟಿದ್ದ ರೈತರಿಗೆ ಈಗ ನಿರಾಸೆ ದೂರವಾಗಿದೆ. ಜಲಾಶಯದ ಗರಿಷ್ಠ ನೀರಿನ ಮಟ್ಟ 124.80 ಅಡಿಗಳಾಗಿದ್ದು ಪ್ರಸ್ತುತ 111.80 ಅಡಿ ನೀರು ಜಲಾಶಯದಲ್ಲಿದೆ. ನಾಲೆಗಳಿಗೆ 3051 ಕ್ಯೂಸೆಕ್ ನೀರನ್ನು ಹೊರ ಬಿಡಲಾಗುತ್ತಿದೆ.

**ಆಲಮಟ್ಟಿಗೆ ಒಳ ಹರಿವು ಹೆಚ್ಚಳ:–** ಆಲಮಟ್ಟಿ ಜಲಾಶಯದಿಂದ 50 ಸಾವಿರ ಕ್ಯೂಸೆಕ್ ಪ್ರಮಾಣದ ಒಳಹರಿವು ಹರಿದು ಬರುತ್ತಿರುವ ಹಿನ್ನೆಲೆಯಲ್ಲಿ ಮುಂಜಾಗ್ರತಾ ಕ್ರಮವಾಗಿ ಬೆಳಗ್ಗೆಯಿಂದ ಬಸವಸಾಗರ ಜಲಾಶಯದ 7 ಕ್ರೆಸ್ಟ್‌ಗೇಟ್‌ಗಳ ಮೂಲಕ 50 ಸಾವಿರ ಕ್ಯೂಸೆಕ್ ನೀರನ್ನು ಕೃಷ್ಣಾನದಿಗೆ ಹರಿಬಿಡಲಾಗಿದೆ. ಮಹಾರಾಷ್ಟ್ರದಲ್ಲಿ ನಿರಂತರ ಮಳೆ ಹಾಗೂ ಕೃಷ್ಣಾ ನದಿಯ ಉಪನದಿಗಳು ಉಕ್ಕಿ ಹರಿಯುತ್ತಿವೆ. ಆಲಮಟ್ಟಿ ಅಣೆಕಟ್ಟೆಗೆ ಒಳಹರಿವಿನ ಪ್ರಮಾಣ ಹಂತ ಹಂತವಾಗಿ ಏರಿಕೆಯಾಗುತ್ತಿದೆ. ಒಳಹರಿವಿನ ಪ್ರಮಾಣದಷ್ಟೇ ನೀರನ್ನು ಬಸವಸಾಗರಕ್ಕೆ ಹರಿಬಿಡಲಾಗುತ್ತಿದೆ. ಅಷ್ಟೇ ಪ್ರಮಾಣದ ನೀರನ್ನು ಇಲ್ಲಿನ ಜಲಾಶಯದಿಂದ ಕೃಷ್ಣಾನದಿಗೆ ಹರಿಸಲಾಗುತ್ತಿದೆ. ನದಿಗೆ ಹೆಚ್ಚಿನ ಪ್ರಮಾಣದಲ್ಲಿ ನೀರು ಹರಿಸುವುದರಿಂದ ತೀರ ಪ್ರದೇಶದಲ್ಲಿ ಬರುವ ರಾಯಚೂರು, ಯಾದಗಿರಿ ಜಿಲ್ಲೆಗಳ ವ್ಯಾಪ್ತಿಯಲ್ಲಿನ ಕೆಳ ಹಂತದ ಸೇತುವೆಗಳಿಗೆ ಪ್ರವಾಹದ ನೀರಿನಿಂದ ಧಕ್ಕೆಯಾಗುವ ಸಾಧ್ಯತೆಗಳಿದ್ದು, ಈ ಹಿನ್ನೆಲೆಯಲ್ಲಿ ಕೆಬಿಜೆಎನ್‌ಎಲ್‌ನಿಂದ ಎರಡೂ ಜಿಲ್ಲಾಡಳಿತಗಳಿಗೆ ಮುನ್ಸೂಚನೆ ನೀಡಲಾಗಿದೆ ಎಂದು ಅಣೆಕಟ್ಟು ವಿಭಾಗದ ಇಇ ಶಂಕರ ನಾಯ್ಕೋಡಿ ತಿಳಿಸಿದ್ದಾರೆ. ಪ್ರಸ್ತುತ ಬಸವಸಾಗರ ಜಲಾಶಯಕ್ಕೆ 50 ಸಾವಿರ ಕ್ಯೂಸೆಕ್ ಒಳಹರಿವಿದ್ದು, 50 ಸಾವಿರ ಕ್ಯೂಸೆಕ್ ಹೊರಹರಿವಿದೆ. 491.46 ಮೀಟರ್‌ಗೆ ತಲುಪಿದ್ದು, 30 ಟಿಎಂಸಿ ಅಡಿಯಷ್ಟು ನೀರು ಸಂಗ್ರಹವಿದೆ.

**ತುಂಗಾ ಜಲಾಶಯಕ್ಕೆ 62000 ಕ್ಯೂಸೆಕ್ ಒಳ ಹರಿವು:** ಭಾರೀ ಮಳೆಗೆ ಜಿಲ್ಲೆಯ ಜೀವನದಿಗಳಾದ ತುಂಗಾ, ಭದ್ರೆ, ಶರಾವತಿ, ಕುಮುದ್ವತಿ, ವರದಾ ನದಿಗಳು ಮೈದುಂಬಿ ಹರಿಯುತ್ತಿದ್ದು, ತುಂಗಾ ಜಲಾಶಯ ಸಂಪೂರ್ಣ ಭರ್ತಿಯಾಗಿ 12 ಗೇಟ್‌ಗಳ ಮೂಲಕ 65 ಸಾವಿರಕ್ಕೂ ಹೆಚ್ಚು ಕ್ಯೂಸೆಕ್ ನೀರನ್ನು ನದಿಗೆ ಬಿಡಲಾಗುತ್ತಿದೆ. ನಗರದಲ್ಲಿ ತುಂಗಾ ನದಿ ತುಂಬಿ ಹರಿಯುತ್ತಿದ್ದು, ಮಂಟಪ ಮುಳುಗಿದೆ. ಶಿಕಾರಿಪುರ, ಸಾಗರ, ತೀರ್ಥಹಳ್ಳಿ, ಹೊಸನಗರ ಸೇರಿದಂತೆ ಹಲವು ಭಾಗದಲ್ಲಿ ವ್ಯಾಪಕ ಮಳೆಯಿಂದಾಗಿ ಹಳ್ಳ, ಕೊಳ್ಳಗಳು ಉಕ್ಕಿ ಹರಿಯುತ್ತಿದ್ದು,

ಅನೇಕ ಹೊಲ, ಗದ್ದೆಗಳಿಗೆ ನೀರು ನುಗ್ಗಿದೆ. ಎಡೆಬಿಡದೆ ಸುರಿಯುತ್ತಿರುವ ಮಳೆಯಿಂದಾಗಿ ಸಂಚಾರ ವ್ಯವಸ್ಥೆಗೂ ಅಡ್ಡಿಯುಂಟಾಗಿದ್ದು, ದೈನಂದಿನ ಜೀವನಕ್ಕೆ ತೊಂದರೆಯುಂಟಾಗಿದೆ.

**ಮೈದುಂಬಿದ ಜೋಗ:** ಶರಾವತಿ ಭಾಗದಲ್ಲಿ ಸತತವಾಗಿ ಮಳೆ ಸುರಿಯುತ್ತಿರುವುದರಿಂದ ಜೋಗ ಜಲಪಾತ ಮತ್ತಷ್ಟು ವೈಭವಗೊಂಡಿದೆ. ಕಳೆದ ಬಾರಿಯೂ ಇದೇ ಅವಧಿಯಲ್ಲಿ ಪ್ರವಾಹ ಉಂಟಾಗಿ ಸಾಕಷ್ಟು ನಷ್ಟ ಉಂಟಾಗಿತ್ತು. ಇದರಿಂದಾಗಿ ಈ ಭಾಗದ ಜನತೆ ಆತಂಕಕ್ಕೆ ಒಳಗಾಗಿದ್ದು, ಈ ವರ್ಷವೂ ಸಹ ಪ್ರವಾಹ ಸಂಭವಿಸಬಹುದೇ ಎಂಬ ಆತಂಕದಲ್ಲಿ ಜೀವನ ನಡೆಸುತ್ತಿದ್ದಾರೆ.

**ತುಂಬಿ ಹರಿಯುತ್ತಿದೆ ಕೃಷ್ಣಾ ತೀರ ಪ್ರದೇಶದಲ್ಲಿ ಆತಂಕ:–** ಬನಹಟ್ಟಿ ಕೃಷ್ಣಾ ಜಲಾನಯನ ಪ್ರದೇಶಗಳಲ್ಲಿ ಧಾರಾಕಾರ ಮಳೆಯಾಗುತ್ತಿರುವುದರಿಂದ ಕೊಯ್ನಾ ಹಾಗೂ ರಾಜಾಪುರ ಡ್ಯಾಂಗಳಿಂದ ಕೃಷ್ಣಾ ನದಿಗೆ ಅಪಾರ ಪ್ರಮಾಣದಲ್ಲಿ ನೀರು ಹರಿದು ಬರುತ್ತಿದೆ. ಕೃಷ್ಣಾ ನದಿ ತುಂಬಿ ಹರಿಯುತ್ತಿರುವುದರಿಂದ ತೀರ ಪ್ರದೇಶದ ಗ್ರಾಮಸ್ಥರು ಭಯ ಪಡುವಂತಾಗಿದೆ. ಹಿಪ್ಪರಗಿ ಜಲಾಶಯಕ್ಕೆ ಒಟ್ಟು 87,500 ಕ್ಯೂಸೆಕ್ ನೀರು ಹರಿದು ಬರುತ್ತಿದೆ. ಜಲಾಶಯದ ನೀರಿನ ಮಟ್ಟ 520.70 ಮೀ. ಆಗಿದೆ. ಮಹಾರಾಷ್ಟ್ರದ ಜಲಾನಯನ ಪ್ರದೇಶಗಳಾದ ಕೊಯ್ನಾ 202 ಮಿಮೀ, ನೌಜಾ 245 ಮಿಮೀ, ಮಹಾಬಲೇಶ್ವರ 183 ಮಿಮೀ, ವಾರಣಾ 165 ಮಿಮೀ, ರಾಧಾನಗಿ 271 ಮಿಮೀ, ದೂಧಗಂಗಾ 255 ಮಿಮೀ ಮಳೆಯಾದ ವರದಿಯಾಗಿದೆ ಎಂದು ರಬಕವಿ–ಬನಹಟ್ಟಿ ತಹಶೀಲ್ದಾರ್ ಪ್ರಶಾಂತ್ ಚನಗೊಂಡ ತಿಳಿಸಿದ್ದಾರೆ.

ಆಧಾರ:ಉದಯವಾಣಿ, ದಿನಾಂಕ:07.08.2020